# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ

| ಭಾಗ – ೪ಎ<br>Part – IVA | ಬೆಂಗಳೂರು, ಸೋಮವಾರ, ೨೪, ಮಾರ್ಚ್, ೨೦೨೫(ಚೈತ್ರ, ೦೩, ಶಕವರ್ಷ, ೧೯೪೭)<br>BENGALURU, MONDAY, 24, MARCH, 2025( CHAITHRA, 03, SHAKAVARSHA, 1947) | ನಂ. ೧೮೬<br>No. 186 |
|---|---|---|

**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 102 ಸೇವನೆ 2022

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 18.03.2025

**ಅಧಿಸೂಚನೆ**

ಕರ್ನಾಟಕ ನಾಗರಿಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021 ಇದನ್ನು ಮತ್ತಷ್ಟು ತಿದ್ದುಪಡಿ ಮಾಡುವುದಕ್ಕೆ ದಿನಾಂಕ: 01.03.2025ರ ಅಧಿಸೂಚನೆ ಸಂಖ್ಯೆ ಸಿಆಸುಇ 102 ಸೇವನೆ 2022 ರಲ್ಲಿ ಪ್ರಕಟಿಸಿರುವ ಈ ಮುಂದಿನ ನಿಯಮಗಳ ಕರಡನ್ನು ಅಧಿಕೃತ ರಾಜ್ಯಪತ್ರದಲ್ಲಿ ಪ್ರಕಟಿಸಿದ ದಿನಾಂಕದಿಂದ 15 ದಿನಗಳೊಳಗಾಗಿ ಅದರಿಂದ ಬಾಧಿತರಾಗುವ ಸಂಭವವಿರುವ ಎಲ್ಲಾ ವ್ಯಕ್ತಿಗಳಿಂದ ಆಕ್ಷೇಪಣೆಗಳನ್ನು ಮತ್ತು ಸಲಹೆಗಳನ್ನು ಆಹ್ವಾನಿಸಿ ದಿನಾಂಕ: 01.03.2025 ರಂದು ಕರ್ನಾಟಕ ರಾಜ್ಯಪತ್ರದ ಭಾಗ IV-ಎ ರಲ್ಲಿ ಕರ್ನಾಟಕ ರಾಜ್ಯ ನಾಗರಿಕ ಸೇವೆಗಳ ಅಧಿನಿಯಮ, 1978 (1990 ರ ಕರ್ನಾಟಕ ಅಧಿನಿಯಮ 14)ರ 3ನೇ ಪ್ರಕರಣದ (2)ನೇ ಉಪ-ಪ್ರಕರಣದ (ಎ) ಖಂಡವನ್ನು ಪ್ರಕರಣದ 8 ರೊಂದಿಗೆ ಓದಿಕೊಂಡು ಅಗತ್ಯಪಡಿಸಲಾದಂತೆ ಪ್ರಕಟಿಸಲಾಗಿರುವುದರಿಂದ;

ಸದರಿ ರಾಜ್ಯಪತ್ರವನ್ನು ದಿನಾಂಕ: 01.03.2025 ರಂದು ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಿರುವುದರಿಂದ;

ಮತ್ತು ಸದರಿ ಕರಡು ನಿಯಮಗಳ ಬಗ್ಗೆ ಸ್ವೀಕೃತವಾಗಿರುವ ಆಕ್ಷೇಪಣೆ ಮತ್ತು ಸಲಹೆಗಳನ್ನು ರಾಜ್ಯ ಸರ್ಕಾರವು ಪರಿಶೀಲಿಸಿರುವುದರಿಂದ;

ಈಗ ಕರ್ನಾಟಕ ರಾಜ್ಯ ನಾಗರಿಕ ಸೇವೆಗಳ ಅಧಿನಿಯಮ, 1978 (1990 ರ ಕರ್ನಾಟಕ ಅಧಿನಿಯಮ 14) ರ 3ನೇ ಪ್ರಕರಣದ (1) ನೇ ಉಪ ಪ್ರಕರಣವನ್ನು 8ನೇ ಪ್ರಕರಣದೊಂದಿಗೆ ಓದಿಕೊಂಡಂತೆ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಕೆಳಕಂಡ ನಿಯಮಗಳನ್ನು ರಚಿಸುತ್ತದೆ, ಎಂದರೆ:-

**ನಿಯಮಗಳು**

**1. ಶೀರ್ಷಿಕೆ ಮತ್ತು ಪ್ರಾರಂಭ.-** (1) ಈ ನಿಯಮಗಳನ್ನು ಕರ್ನಾಟಕ ನಾಗರಿಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) (3ನೇ ತಿದ್ದುಪಡಿ) ನಿಯಮಗಳು, 2025 ಎಂದು ಕರೆಯತಕ್ಕದ್ದು.

(2) ಇವು ಅಧಿಕೃತ ರಾಜ್ಯಪತ್ರದಲ್ಲಿ ಅಂತಿಮವಾಗಿ ಪ್ರಕಟಗೊಂಡ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**2. ನಿಯಮ 7ರ ತಿದ್ದುಪಡಿ.-** ಕರ್ನಾಟಕ ನಾಗರಿಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು, 2021ರ ನಿಯಮ 7ರ ಕೊನೆಯಲ್ಲಿ ಈ ಕೆಳಕಂಡ ಪರಂತುಕವನ್ನು ಸೇರಿಸತಕ್ಕದ್ದು.-

"ಪರಂತು, ಅಭ್ಯರ್ಥಿಯು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಅಥವಾ; ರಾಜ್ಯ ಸರ್ಕಾರವು ಅದಕ್ಕೆ ತತ್ಸಮಾನವೆಂದು ಘೋಷಿಸಿದ ಯಾವುದೇ ಪರೀಕ್ಷೆಯಲ್ಲಿ ಅಥವಾ; ಎಸ್.ಎಸ್.ಎಲ್.ಸಿ.ಗಿಂತ ಉನ್ನತ ಮಟ್ಟದ ಪರೀಕ್ಷೆಗಳಲ್ಲಿ ಕನ್ನಡ ವಿಷಯವನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯಾಗಿ ಅಭ್ಯಸಿಸಿದ್ದರೆ, ಅಥವಾ; ಕನ್ನಡ ಮಾಧ್ಯಮದಲ್ಲಿ ಅಧ್ಯಯನ ಮಾಡಿ ಇಂತಹ ಪರೀಕ್ಷೆಗಳನ್ನು ಪಾಸು ಮಾಡಿದ್ದರೆ, ಅಥವಾ; ಆಯೋಗ ಅಥವಾ ಇನ್ನಿತರ ಯಾವುದೇ ಆಯ್ಕೆ ಪ್ರಾಧಿಕಾರವು ಈ ಹಿಂದೆ ನಡೆಸಿದ ಕನ್ನಡ ಭಾಷೆಯ ಪರೀಕ್ಷೆಯಲ್ಲಿ (ಕಡ್ಡಾಯ ಕನ್ನಡ ಪರೀಕ್ಷೆ) ಉತ್ತೀರ್ಣರಾಗಿದ್ದರೆ, ಅಂತಹ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಪರೀಕ್ಷೆಯಿಂದ ವಿನಾಯಿತಿ ನೀಡತಕ್ಕದ್ದು."

**3. ಉಳಿಸುವಿಕೆ:** ಈ ನಿಯಮಗಳು ಪ್ರಸ್ತುತ ಅಧಿಸೂಚನೆ ಹೊರಡಿಸಿ, ಪರೀಕ್ಷಾ ಪ್ರಕ್ರಿಯೆ ಆರಂಭವಾಗದ ಎಲ್ಲಾ ನೇಮಕಾತಿಗಳಿಗೆ ಅನ್ವಯವಾಗತಕ್ಕದ್ದು.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ,**

(ವೀರಭದ್ರು)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1)

## GOVERNMENT OF KARNATAKA

NO. DPAR 102 SCR 2022

Karnataka Government Secretariat,
Vidhana Soudha,
Bengaluru, dated: 24.03.2025.

## NOTIFICATION

Whereas the draft of the following rules to further to amend the Karnataka Civil Services (Direct Recruitment) (General) Rules, 2021 was published as required by clause (a) of sub-section (2) of Section 3 read with Section 8 of the Karnataka State Civil services Act, 1978 (Karnataka Act 14 of 1990) in Notification No. DPAR 102 SCR 2022, dated: 01.03.2025 in Part IV-A of the Karnataka Gazette Extraordinary dated 01.03.2025 inviting objections and suggestions from all persons likely to be affected thereby within fifteen days from the date of publication of the draft in the Official Gazette.

Whereas, the said Gazette was made available to the public on 01.03.2025.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



And whereas, the objections and suggestions received have been considered by the State Government.

Now, therefore, in exercise of the powers conferred by sub-section (1) of section 3 read with section 8 of the Karnataka State Civil Services Act, 1978 (Karnataka Act 14 of 1990), the Government of Karnataka hereby makes the following rules, namely:-

**RULES**

**1. Title and Commencement.-** (1) These rules may be called the Karnataka Civil Services (Direct Recruitment) (General) (3rd Amendment) Rules, 2025.

(2) They shall come into force from the date of their final publication in the Official Gazette.

**2. Amendment of rule 7.-** In the Karnataka Civil Services (Direct Recruitment) (General) Rules, 2021 (hereinafter referred to as the said rules), after rule 7 the following proviso shall be inserted at the end, namely:-

> "Provided that, the Commission or any Selecting Authority may exempt a candidate from passing the test in Kannada Language (Compulsory Kannada Examination), if the candidate has passed the Secondary School Leaving Certificate Examination conducted by the Karnataka Secondary Education Examination Board or any Examination declared as equivalent thereto by the State Government or any Examination higher than the Secondary School Leaving Certificate Examination, in which Kannada is the main language or the Second Language, or if he has studied and passed these examinations in Kannada Medium, or he has passed the Kannada Language Test conducted by the Commission or any Selecting Authority earlier."

**3. Savings.-** These rule shall apply for all recruitments for which notification have been issued but the examination process has not yet commenced.

**By Order and in the name of the Governor of Karnataka,**

(Veerabhadra)
Under Secretary to Government
Department of Personnel and Administrative Reforms
(Service Rules-1).

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು